## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀಮತಿ ಮಂಜಮ್ಮ ಅಧ್ಯಕ್ಷರು, ಶ್ರೀಮತಿ ವಿಶಾಲಾಕ್ಷಮ್ಮ, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಎಂ.ಸಿ ಲಕ್ಕೇರಪ್ಪ ಕುಂದೂರು ಗ್ರಾಮ ಪಂಚಾಯಿತಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4)ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**
1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರ ಪತ್ರ ಸಂಖ್ಯೆ:ಪ್ರಾಅಕ/ಅಭಿವೃದ್ಧಿ/ಸಿಆರ್/14/2019-20, ದಿನಾಂಕ:12.12.2019.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 29 ಗ್ರಾಪಂಅ 2020, ದಿನಾಂಕ:27.01.2020.
3. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರಿಟ್ ಅರ್ಜಿ ಸಂಖ್ಯೆ:5780/2020 ರ ಪ್ರಕರಣದಲ್ಲಿ ನೀಡಿದ ತೀರ್ಪು ದಿನಾಂಕ:16.03.2020.
4. ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್, ದಿನಾಂಕ:05.01.2021.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರ ವರದಿಯಲ್ಲಿ ದಾವಣಗೆರೆ ಜಿಲ್ಲೆಯ ಹೊನ್ನಾಳಿ ತಾಲ್ಲೂಕಿನ ಕುಂದೂರು ಗ್ರಾಮ ಪಂಚಾಯಿತಿಯಲ್ಲಿ ಕರ ವಸೂಲಿಗಾರರ ಹುದ್ದೆಯ ನೇಮಕಾತಿಗೆ ಅರ್ಹತೆಯ ಆಧಾರದ ಮೇಲೆ ಆಯ್ಕೆ ಮಾಡದಿರುವುದರಿಂದ, ಆಯ್ಕೆಯಾಗದ ಅಭ್ಯರ್ಥಿಯು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಿದ್ದು, ಈ ಪ್ರಕರಣದಲ್ಲಿ ಅರ್ಹತೆಯನ್ನು ಪರಿಗಣಿಸಿ ಅಭ್ಯರ್ಥಿಯನ್ನು ಆಯ್ಕೆ ಮಾಡಲು ಮಾನ್ಯ ಉಚ್ಚ ನ್ಯಾಯಲಯವು ಆದೇಶ ಮಾಡಿದ್ದು, ಈ ಆದೇಶ ಪಾಲನೆ ಮಾಡದಿದ್ದರಿಂದ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಾಗಿದ್ದು, ನಂತರ ಅರ್ಹತೆಯನ್ನು ಪರಿಗಣಿಸಿ, ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗಿರುವುದು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ವರದಿಯನ್ವಯ ಸಾಬೀತಾಗಿರುತ್ತದೆ.

ಓದಲಾದ ಕ್ರಮಾಂಕ (2)ರ ಸರ್ಕಾರದ ಆದೇಶದಲ್ಲಿ ಶ್ರೀಮತಿ ಮಂಜಮ್ಮ, ಉಪಾಧ್ಯಕ್ಷರಾದ ಶ್ರೀಮತಿ ವಿಶಾಲಾಕ್ಷಮ್ಮ ಇವರುಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 48(4) & 48(5) ರನ್ವಯ ಕ್ರಮವಾಗಿ ಅಧ್ಯಕ್ಷ ಸ್ಥಾನ, ಉಪಾಧ್ಯಕ್ಷ ಸ್ಥಾನ ಹಾಗೂ ಸದಸ್ಯತ್ವ ಸ್ಥಾನದಿಂದ ಮತ್ತು ಸದಸ್ಯರುಗಳಾದ ಶ್ರೀಮತಿ ಗೌರಮ್ಮ, ಶ್ರೀ ಮೃತ್ಯಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀಮತಿ ಲಕ್ಕೇರಪ್ಪ, ಎಂ.ಸಿ ಕುಂದೂರು ಗ್ರಾಮ ಪಂಚಾಯಿತಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರುಗಳನ್ನು ಸದರಿ ಅಧಿನಿಯಮದ ಪ್ರಕರಣ 43(ಎ) ರನ್ವಯ ಕುಂದೂರು ಗ್ರಾಮ ಪಂಚಾಯಿತಿ ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಿ ಆದೇಶಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ಸರ್ಕಾರದ ಆದೇಶ ಸಂಖ್ಯೆ:ಗ್ರಾಪಂಅ 29 ಗ್ರಾಪಂಅ 2020, ದಿನಾಂಕ:27.01.2020 ನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:5780/2020 ಅನ್ನು ದಾಖಲಿಸಿದ್ದು, ಈ ಪ್ರಕರಣದ ಬಗ್ಗೆ ಮಾನ್ಯ ನ್ಯಾಯಾಲಯವು ದಿನಾಂಕ:16.03.2020 ರಂದು ತೀರ್ಪು ನೀಡಿ ಪ್ರಕರಣವನ್ನು ವಿಲೇಗೊಳಿಸಿರುತ್ತದೆ. ಅದರ ಉದ್ಧೃತ ಭಾಗ ಈ ಕೆಳಕಂಡಂತಿರುತ್ತದೆ.

> In view of the aforesaid facts and circumstances, order dated 27.10.2020 Vide Annexure-Q is set aside reserving liberty to the respondent-State to furnish copy of the Communication cum Enquiry Report dated 12.12.2019 of the Regional Commissioner, Banglore Division, Banglore, to the petitioners inviting their explanation on the Enquiry Report. On receipt of such explanation/objections, if any, the State is directed to examine and consider each of the contentions to be raised, while passing final order. The above proceedings shall be completed within a period of two months from the date of receipt of copy of this order.

The petitioners had raised one more contention namely, Regional Commissioner is not empowered to hold enquiry and is contrary to Section 43(A). Insofar as this contention is concerned, petitioner are directed to urge before the State Government in their explanation/objections.

With the above observations, petition stands disposed of.

ಮಾನ್ಯ ನ್ಯಾಯಾಲಯದ ಆದೇಶ ಮತ್ತು ವಿಚಾರಣಾಧಿಕಾರಿಗಳ ವಿಚಾರಣಾ ವರದಿಯ ಪ್ರತಿಯೊಂದಿಗೆ ಕ್ರಮಾಂಕ(4) ರಲ್ಲಿನ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು. ಆದರೆ, ಸದರಿಯವರುಗಳು ಈ ನೋಟೀಸುಗಳಿಗೆ ಯಾವುದೇ ಲಿಖಿತ ಹೇಳಿಕೆ/ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ. ಆದ್ದರಿಂದ ಅವರುಗಳ ಮೇಲಿನ ಆಪಾದನೆಗಳಿಗೆ ಸಂಬಂಧಿಸಿದಂತೆ ಈ ಹಿಂದೆ ಸರ್ಕಾರವು ಆದೇಶಿಸಲಾಗಿದ್ದ ಕ್ರಮಾಂಕ(2) ರಲ್ಲಿನ ಆದೇಶವನ್ನು ಮತ್ತೊಮ್ಮೆ ಪುನರುಚ್ಛರಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/29/ಗ್ರಾಪಂಅ/2020, ಬೆಂಗಳೂರು, ದಿನಾಂಕ:11.11.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಮಂಜಮ್ಮ ಅಧ್ಯಕ್ಷರು, ಶ್ರೀಮತಿ ವಿಶಾಲಾಕ್ಷಮ್ಮ, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಾದ ಶ್ರೀಮತಿ ಸಾಕಮ್ಮ, ಶ್ರೀಮತಿ ಗೌರಮ್ಮ, ಶ್ರೀ ಮೃತ್ಯಂಜಯಪ್ಪ, ಶ್ರೀ ಷಣ್ಮುಖಪ್ಪ, ಶ್ರೀ ಕರಿಯಪ್ಪ, ಶ್ರೀ ರಮೇಶ್ ಮತ್ತು ಶ್ರೀ ಎಂ.ಸಿ ಲಕ್ಕೇರಪ್ಪ ಕುಂದೂರು ಗ್ರಾಮ ಪಂಚಾಯಿತಿ ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರುಗಳ ಮೇಲಿನ ಆಪಾದನೆಗಳು ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ರವರ ವಿಚಾರಣಾ ವರದಿಯಿಂದ ಸಾಬೀತಾಗಿರುವ ಹಿನ್ನೆಲೆಯಲ್ಲಿ ಈ ಹಿಂದೆ ಸರ್ಕಾರವು ಹೊರಡಿಸಿದ್ದ ಆದೇಶ ಸಂಖ್ಯೆ:ಗ್ರಾಅಪ 29 ಗ್ರಾಪಂಅ 2020 ದಿನಾಂಕ:27.01.2020 ಅನ್ನು ಸರ್ಕಾರವು ಮತ್ತೊಮ್ಮೆ ಪುನರುಚ್ಛರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಚೇತನ.ಎಂ) 11/11/21
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಗೆ:**

1. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು, 2ನೇ ಮಹಡಿ, ಬಿ.ಎಂ.ಟಿ.ಸಿ. ಕಟ್ಟಡ, ಶಾಂತಿನಗರ, ಕೆ.ಹೆಚ್. ರಸ್ತೆ, ಬೆಂಗಳೂರು.
2. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
3. ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ.
4. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ಹೊನ್ನಾಳಿ ತಾಲ್ಲೂಕು ಪಂಚಾಯಿತಿ, ದಾವಣಗೆರೆ ಜಿಲ್ಲೆ.
6. ಸರ್ಕಾರಿ ವಕೀಲರು, ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು.
7. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕುಂದೂರು ಗ್ರಾಮ ಪಂಚಾಯಿತಿ, ಹೊನ್ನಾಳಿ ತಾಲ್ಲೂಕು, ದಾವಣಗೆರೆ ಜಿಲ್ಲೆ.
8. ಸಂಬಂಧಿಸಿದವರಿಗೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಹೊನ್ನಾಳಿ ಇವರ ಮುಖಾಂತರ)**
9. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

*********